## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:** | 586(847) |
| **ವಿಧಾನ ಪರಿಷತ್ತಿನ ಸದಸ್ಯರ ಹೆಸರು:** | ಶ್ರೀ ಎಂ. ನಾಗರಾಜು<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| **ಉತ್ತರಿಸಬೇಕಾದ ದಿನಾಂಕ:** | 26-12-2022 |
| **ಉತ್ತರಿಸುವ ಸಚಿವರು:** | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳು ಮತ್ತು ಆರ್ಥಿಕವಾಗಿ ಹಿಂದುಳಿದಿರುವ ವರ್ಗಗಳ ವಿದ್ಯಾರ್ಥಿಗಳಿಗೆ ಉಚಿತವಾಗಿ ವೈದ್ಯಕೀಯ ಶಿಕ್ಷಣ ನೀಡಲು ಸರ್ಕಾರವು ಯಾವುದಾದರೂ ಯೋಜನೆಯನ್ನು ರೂಪಿಸಿದೆಯೇ; ರೂಪಿಸಿದ್ದಲ್ಲಿ, ಈ ವರ್ಗಗಳ ವಿದ್ಯಾರ್ಥಿಗಳಿಗೆ ಮತ್ತು ಬಡ ರೈತರ ಮಕ್ಕಳಿಗೆ ಉಚಿತ ವೈದ್ಯಕೀಯ ಮತ್ತು ಅರೆ ವೈದ್ಯಕೀಯ ಶಿಕ್ಷಣ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು; | ವೈದ್ಯಕೀಯ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ & ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಈ ಕೆಳಕಂಡ ಸೌಲಭ್ಯಗಳನ್ನುಒದಗಿಸಲಾಗುತ್ತಿದೆ.<br>• Stethoscope, apron, emergency lights, BP apparatus ವಿತರಣೆ.<br>• ವೈದ್ಯಕೀಯ ರೆಫರೆನ್ಸ್ ಪುಸ್ತಕಗಳ ವಿತರಣೆ.<br>• ಹೆಚ್ಚುವರಿ ಭೋಜನ ವೆಚ್ಚ.<br>• ರೂ.2.50ಲಕ್ಷ ಮೇಲ್ಪಟ್ಟು ರೂ.10.00ಲಕ್ಷದೊಳಗಿನ ಆದಾಯ ಮಿತಿಯವರೆಗೆ ಶೇ.100% ವೈದ್ಯಕೀಯ ಪ್ರವೇಶ ಶುಲ್ಕ ಮರುಪಾವತಿ.<br>• ವಾರ್ಷಿಕ ಕುಟುಂಬ ಆದಾಯ ರೂ.5.00ಲಕ್ಷದೊಳಗಿರುವ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಣೆ.<br>ಸರ್ಕಾರಿ ಸಂಸ್ಥೆಯ ನರ್ಸಿಂಗ್ & ಪ್ಯಾರಾ ಮೆಡಿಕಲ್ ವಿದ್ಯಾರ್ಥಿಗಳಿಗೆ ಟ್ಯಾಬ್ Stethoscope, apron, BP apparatus, reference books & ಹೆಚ್ಚುವರಿ ಭೋಜನಾ ವೆಚ್ಚವನ್ನು ಒದಗಿಸಲಾಗುತ್ತಿದೆ |
| ಆ) | ಇಂತಹ ಯೋಜನೆಗಳಿಂದ ಸಮಾಜದ ಎಲ್ಲಾ ವರ್ಗದ ಜನರಿಗೆ ಉತ್ತಮ ಚಿಕಿತ್ಸೆ ನೀಡಲು ಅನುಕೂಲವಾಗಲಿದ್ದು, ವೈದ್ಯರ ಕೊರತೆ ಕೂಡ ನೀಗಿಸಬಹುದಾಗಿದ್ದು ಸರ್ಕಾರದ "ನಮ್ಮ ಕ್ಲಿನಿಕ್" ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಉಚಿತ ವೈದ್ಯಕೀಯ ಶಿಕ್ಷಣ ಅತ್ಯಂತ ಉಪಯುಕ್ತವಾದುದ್ದಲ್ಲವೇ? ಈ ಬಗ್ಗೆ ಸರ್ಕಾರ ಚಿಂತಿಸುವುದೇ; | ಹೌದು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ರಾಜ್ಯಾದ್ಯಂತ "ನಮ್ಮ ಕ್ಲಿನಿಕ್‌ಗಳನ್ನು" ಕೊಳಗೇರಿ ನಿವಾಸಿಗಳು, ದಿನಗೂಲಿ ಕಾರ್ಮಿಕರು ಮತ್ತು ಸಮಾಜದಲ್ಲಿರುವ ಇತರ ದುರ್ಬಲ ವರ್ಗಗಳಿಗೆ ಸುಲಭವಾಗಿ ವೈದ್ಯಕೀಯ ಸೇವೆ ದೊರಕಿಸಬೇಕು ಎನ್ನುವ ದೃಷ್ಟಿಯಿಂದ ಪ್ರಾರಂಭಿಸಲಾಗುತ್ತಿದ್ದು, ಮೇಲಿನಂತೆ SC/ST ವಿದ್ಯಾರ್ಥಿಗಳಿಗೆ ಉಚಿತವಾಗಿ ವೈದ್ಯಕೀಯ ಉಪಕರಣ ಹಾಗೂ ಶುಲ್ಕ ಮರುಪಾವತಿಯಂತಹ ಯೋಜನೆಯಿಂದ ವೈದ್ಯಕೀಯ ಶಿಕ್ಷಣವನ್ನು ಆಯ್ಕೆ ಮಾಡಿಕೊಳ್ಳಲು ಪ್ರೇರೇಪಿಸಲಾಗುತ್ತಿದೆ. |

No: MED 167 RGU 2022

(ಡಾ:ಕೆ.ಸುಧಾಕರ್)
ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು